ದಿನಾಂಕ : 25.03.2024

ಅಸಲು ದಾವೆ : 97/2023 ಪಿ.ಡಬ್ಲ್ಯೂ.1

<u>ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>

ಸಾಕ್ಷಿ ಅವರ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿ ಅದರಲ್ಲಿರುವ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆಂದು ತಿಳಿಸಿರುತ್ತಾರೆ.

**<u>ಮುಂದುವರೆದ ಮುಖ್ಯ ವಿಚಾರಣೆ: ವಾದಿ ಪರ ವಕೀಲರಾದ ಶ್ರೀ ಹೆಚ್.ಎಂ ರವರಿಂದ:</u>**

ಪ್ರತಿವಾದಿ ನನಗೆ ಕ್ರಯದ ಕರಾರು ಪತ್ರ ಬರೆದುಕೊಟ್ಟಿದ್ದು, ಅದನ್ನು ಹಾಜರು ಪಡಿಸಿದ್ದು ಅದನ್ನು ನಿಪಿ.1 ಎಂದು, ಪ್ರತಿವಾದಿ ಪ್ರತಿ ಪುಟಕ್ಕೂ ಸಹಿ ಮಾಡಿದ್ದು, ಕೊನೆಯ ಪುಟದಲ್ಲಿರುವ ಅವರ ಸಹಿಯನ್ನು ನಿಪಿ.1ಎ ಎಂದು ಗುರುತಿಸಲಾಯಿತು. ನಾನು ನಿಪಿ 1 ದಾಖಲೆಯ ಪ್ರತಿ ಒಂದು ಪುಟಕ್ಕೂ ಸಹಿ ಮಾಡಿದ್ದು ಕೊನೆಯ ಪುಟದಲ್ಲಿರುವ ನನ್ನ ಸಹಿಯನ್ನು ನಿಪಿ1ಬಿ ಎಂದು ಗುರುತಿಸಲಾಯಿತು. ಸ್ವಾಮಿ ಮತ್ತು ಶಿವಣ್ಣ ಎನ್ನುವವರು ನಿಪಿ1 ದಾಖಲೆಗೆ ಸಾಕ್ಷಿದಾರರಾಗಿ ಸಹಿಗಳನ್ನು ಮಾಡಿರುತ್ತಾರೆ. ಸದರಿ ಸಹಿಗಳನ್ನು ಗುರುತಿಸಿದ್ದು ನಿಪಿ 1.ಸಿ ಮತ್ತು ನಿಪಿ 1 ಡಿ ಎಂದು ಗುರುತಿಸಲಾಯಿತು. ಆರ್.ಚಿಕ್ಕಯ್ಯ ರವರು ಸದರಿ ಪತ್ರವನ್ನು ಬರೆದಿರುತ್ತಾರೆ. ಸದರಿಯವರ ಸಹಿಯನ್ನು ನಿಪಿ1ಇ ಎಂದು ಗುರುತಿಸಲಾಯಿತು. ಇ.ಸಿ. ಯನ್ನು ಹಾಜರು ಮಾಡಿದ್ದು ಅದನ್ನು ನಿಪಿ 2 ಎಂದು, ದಾವಾ ಆಸ್ತಿಗೆ ಸಂಬಂಧಪಟ್ಟಂತೆ 4 ಪುಟಗಳುಳ್ಳ ಆರ್.ಟಿ.ಸಿಯನ್ನು ನಿಪಿ.3 ಎಂದು, ಪ್ರತಿವಾದಿಗೆ ವಕೀಲರ ಮೂಲಕ ನೋಟಿಸು ಕಳುಹಿಸಿದ್ದು ಕಛೇರಿ ನಕಲನ್ನು ನಿಪಿ.4 ಎಂದು, ಅಂಚೆ ರಶೀದಿಯನ್ನು ನಿಪಿ.5 ಎಂದು ಗುರುತಿಸಲಾಯಿತು. ಸ್ವೀಕೃತಿ ಪತ್ರವನ್ನು ನಿಪಿ.6 ಎಂದು ಗುರುತಿಸಲಾಯಿತು.

ಆದುದ್ದರಿಂದ ವಾದ ಪತ್ರದಲ್ಲಿ ಕೇಳಿರುವಂತೆ ಆದೇಶ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲಿಗೆ ಮುಂದೂಡಲಾಯಿತು.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮದ್ದೂರು.